# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ.
# ಸಿ ಸಿ  -47/2019

ದಿನಾಂಕಃ 16.06.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ  ಬೋಧಿಸಲಾಯಿತು.

| | | |
|---|---|---|
| ಹೆಸರು | : | ಹೆಚ್ ನಾಗರಾಜ |
| ತಂದೆಯ    ಹೆಸರು | : | ಲೇಟ್ ಹೆಚ್ ಎಂ ಕೆಂಚವಿರಯ್ಯ |
| ವಯಸ್ಸು | : | 64 |
| ಉದ್ಯೋಗ | : | ನಿವೃತ್ತ ಪಿ.ಎಸ್.ಐ |
| ವಾಸಸ್ಥಳ | : | ದಾವಣಗೆರೆ |

## ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ

ನಾನು 2013 ರಿಂದ 2018 ರವರೆಗೆ ಹೊಸಹಳ್ಳಿ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಯಾಗಿ ಕರ್ತವ್ಯನಿರ್ವಹಿಸುತ್ತಿರುತ್ತೇನೆ.

ಚಾಸಾ 17 ರವರ ಮೌಖಿಕ ಆದೇಶದ ಮೇರೆಗೆ ದಿನಾಂಕ 10.03.2014 ರಂದು ಚಾಸಾ 5 ರಿಂದ 7 ರವರ ಹೇಳಿಕೆಗಳನ್ನು ಪಡೆದೆಕೊಂಡಿರುತ್ತೇನೆ. ದಿನಾಂಕ 27.07.2014 ರಂದು ಗಾಯಾಳು ಚಾಸಾ 4 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 20.12.2017 ರಂದು ಚಾಸಾ 17 ರವರ ಆದೇಶದ ಹುಬ್ಬಳಿಯ ಕಿಮ್ಸ ಆಸ್ಪತ್ರೆಗೆ ಭೇಟಿಕೊಟ್ಟು ಬೆಳಿಗ್ಗೆ 11 ರಿಂದ 1 ಗಂಟೆಯವರೆಗೆ ಮೃತದ ಶವ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸದರಿ ಶವ ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ 5 ಎಂದು ಗುರುತಿಸಲಾಗಿದೆ. ಅದರಲ್ಲಿರುವ ನನ್ನ ಸಹಿಯನ್ನು ನಿಪಿ 5 ಎ ಎಂದು ಗುರುತಿಸಲಾಗಿದೆ. ಚಾಸಾ 12 ಮತ್ತು 13 ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.  ಆನಂತರ ಮುಂದಿನ ತನಿಖೆಯನ್ನು ಚಾಸಾ 17 ರವರಿಗೆ ಪ್ರಕರಣದ ಕಡತವನ್ನು ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ**

ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಶವ ಪಂಚನಾಮೆಯನ್ನು ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಮ್ಮ ಮೇಲಾಧಿಕಾರಿಯವರ ಮಾತನ್ನು ಕೇಳಿ ಮೃತನಿಗೆ ಸಹಾಯಮಾಡಲು ಉದ್ದೇಶ ಸುಳ್ಳು ಸಾಕ್ಷಿ ಹೇಳುತ್ತಿದ್ದೀರ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ,ಹೇ,ಕೇ,ಸರಿ ಇದೆ,

ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ
ಕೂಡ್ಲಿಗಿ.